**13 ಸೆಪ್ಟೆಂಬರ್, 2017**

## ಸಂಮಿತ್ರ ಸಹಕಾರಿ ಬ್ಯಾಂಕ್ ಮರ್ಯಾದಿತ್, ಮುಂಬೈ, ಮಹಾರಾಷ್ಟ್ರ-ಇದಕ್ಕೆ ಬ್ಯಾಂಕಿಂಗ್ ನಿಯಂತ್ರಣ ಕಾಯಿದೆ 1949 (ಎ ಎ ಸಿ ಎಸ್) ರ ಪ್ರಕರಣ 35 A ರ ಅಡಿಯಲ್ಲಿ ನಿರ್ದೇಶನ

ಭಾರತೀಯ ರಿಜರ್ವ್ ಬ್ಯಾಂಕ್ ಬ್ಯಾಂಕಿಂಗ್ ನಿಯಂತ್ರಣ ಕಾಯಿದೆ 1949(ಎ ಎ ಸಿ ಎಸ್) ರ ಪ್ರಕರಣ 35 A ರ ಅಡಿಯಲ್ಲಿ ಸಂಮಿತ್ರ ಸಹಕಾರಿ ಬ್ಯಾಂಕ್ ಮರ್ಯಾದಿತ್, ಮುಂಬೈ, ಮಹಾರಾಷ್ಟ್ರ -ಇದನ್ನು 14 ಜೂನ್ 2016 ರ ವ್ಯವಹಾರ ಸಮಯದ ನಂತರ ಆರು ತಿಂಗಳುಗಳ ಕಾಲ ನಿರ್ದೇಶನಗಳಡಿ ಇರಿಸಲಾಗಿತ್ತು. ಈ ನಿರ್ದೇಶನಗಳ ಸಿಂಧುತ್ವವನ್ನು 07 ಡಿಸೆಂಬರ್ 2016 ಹಾಗೂ 08 ಜೂನ್ 2017 ರಲ್ಲಿ ನೀಡಿದ ಆದೇಶದ ಮೇರೆಗೆ ಮತ್ತೆ ಆರು ತಿಂಗಳು ಹಾಗೂ ಮೂರು ತಿಂಗಳು ಅನುಕ್ರಮವಾಗಿ ವಿಸ್ತರಿಸಲಾಗಿತ್ತು. ಈ ಮೂಲಕ ಸಾರ್ವಜನಿಕರಿಗೆ ತಿಳಿಸುವುದೇನೆಂದರೆ ಮೇಲೆ ತಿಳಿಸಿದ ನಿರ್ದೇಶನಗಳ ಸಿಂಧುತ್ವವನ್ನು ನಮ್ಮ 08 ಸೆಪ್ಟೆಂಬರ್ 2017 ರಂದು ನೀಡಿದ ಆದೇಶದ ಅನುಸಾರ ಮತ್ತೆ ಆರು ತಿಂಗಳು ಅಂದರೆ 15 ಸೆಪ್ಟೆಂಬರ್ 2017 ರಿಂದ 14 ಮಾರ್ಚ್ 2018 ರ ವರೆಗೆ ವಿಸ್ತರಿಸಲಾಗಿದೆ (ಪರಿಶೀಲನೆಗೆ ಒಳಪಡುತ್ತದೆ)..

ಭಾರತೀಯ ರಿಸರ್ವ್ ಬ್ಯಾಂಕಿನಿಂದ ನೀಡಲ್ಪಟ್ಟ ಈ ತಿದ್ದುಪಡಿ ನಿರ್ದೇಶನವು, ಈ ಬ್ಯಾಂಕಿನ ಹಣಕಾಸಿನ ಪರಿಸ್ಥಿತಿಯಲ್ಲಿ ಗಣನೀಯವಾಗಿ ಸುಧಾರಣೆಯಾಗಿ ಭಾರತೀಯ ರಿಸರ್ವ್ ಬ್ಯಾಂಕಿಗೆ ತೃಪ್ತಿದಾಯಕವಾಗಿ ತೋರಿದೆಯೆಂದು ಅರ್ಥೈಸಿಕೊಳ್ಳಬಾರದು.

ನಿರ್ದೇಶನದ ಒಂದು ಪ್ರತಿಯನ್ನು ಬ್ಯಾಂಕ್ ಆವರಣದಲ್ಲಿ ಸಾರ್ವಜನಿಕರ ಮಾಹಿತಿಗಾಗಿ ಪ್ರದರ್ಶಿಸಲಾಗಿದೆ

ಉಲ್ಲೇಖದ ಅಡಿಯಲ್ಲಿರುವ ನಿರ್ದೇಶನದ ಇತರ ನಿಯಮಗಳು ಮತ್ತು ಷರತ್ತುಗಳು ಬದಲಾಗದೆ ಹಾಗೆ ಉಳಿಯುತ್ತವೆ.

**ಅಜಿತ್ ಪ್ರಸಾದ್**
ಸಹಾಯಕ ಸಲಹೆಗಾರರು

**ಪತ್ರಿಕಾ ಪ್ರಕಟಣೆ : 2017-2018/722**